**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 7 ಸೇಇವಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 16.3.2013.

**ಸುತ್ತೋಲೆ**

ADO (Registrar) / PS

ವಿಷಯ: ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರ ನ್ಯಾಯಾಲಯಗಳು ನೀಡುವ ಆದೇಶಗಳ ಮೇಲೆ ಕ್ರಮ ತೆಗೆದುಕೊಳ್ಳುವ ಬಗ್ಗೆ.

ಉಲ್ಲೇಖ: 1) ದಿನಾಂಕ 25.8.1990ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 25 ಸೇಇವಿ 90.
2) ದಿನಾಂಕ 9.7.2001ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 6 ಸೇಅನ್ಯಾ 2001.

ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರೆ ನ್ಯಾಯಾಲಯಗಳು ಅರ್ಜಿ, ರಿಟ್ ಅರ್ಜಿ ಮತ್ತು ಮೇಲ್ಮನವಿಗಳಲ್ಲಿ ನೀಡುವ ಆದೇಶಗಳನ್ನು ಪುನರಾವಲೋಕಿಸುವ ಬಗ್ಗೆ ಮತ್ತು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಕ್ರಮ ತೆಗೆದುಕೊಳ್ಳುವ ಬಗ್ಗೆ ಉಲ್ಲೇಖ (1)ರಲ್ಲಿರುವ ಅಧಿಕೃತ ಜ್ಞಾಪನದಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.

2. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (2)ರ ಅಧಿಕೃತ ಜ್ಞಾಪನದಲ್ಲಿ ಹೆಚ್ಚುವರಿ ಸೂಚನೆಗಳನ್ನು ನೀಡಲಾಗಿರುತ್ತದೆ.

3. ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರಡಿ ಸಕ್ಷಮ ಪ್ರಾಧಿಕಾರ ಸರ್ಕಾರಿ ನೌಕರರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಿ ಅಥವಾ ಸೇವೆಯಿಂದ ತೆಗೆದು ಹಾಕಿ ಅಥವಾ ಸೇವೆಯಿಂದ ವಜಾ ಮಾಡಿದ ಆದೇಶದ ವಿರುದ್ಧ ಸಂಬಂಧಿಸಿದ ನೌಕರರು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಲ್ಲಿಸಿ ಪ್ರಶ್ನಿಸಿದಾಗ, ನ್ಯಾಯ ಮಂಡಳಿಯು ಅಂತಹ ಆದೇಶಕ್ಕೆ ತಡೆಯಾಜ್ಞೆ ನೀಡಿದಲ್ಲಿ, ಅಂತಹ ತಡೆಯಾಜ್ಞೆಯನ್ನು ಅನುಷ್ಠಾನಗೊಳಿಸುವುದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ನ್ಯಾಯಾಲಯ ನಿಂದನಾ ಅರ್ಜಿ ಸಂಖ್ಯೆ: 192/2012ರಲ್ಲಿ ದಿನಾಂಕ 21.9.2012ರಂದು ನೀಡಿರುವ ಆದೇಶದಲ್ಲಿ ಈ ಕೆಳಕಂಡಂತೆ ಅವಲೋಕನೆ ಮಾಡಿರುತ್ತದೆ :-

> "It appears that the order of the Tribunal has not been properly understood by the Governemnt. indicate that it is only in such cases where the order of stay becomes inoperative or can not be obeyed that the party can plead his inability to obey the order. But here also, it is imperative that he shall appear before the court and shall seek modification of interim order.
>
> Where an order of dismissal, or of compulsory retirement or of discharge from service is challenged, the order of stay by court

PS 63 13/4/13

suspends the order impugned during the period of stay and therefore the authority is bound to take back the relieved Government servant to duty. Therefore the respondent shall take back the applicant to duty forthwith and report compliance positively by 5.10.2012.

A copy of this order be furnished to the learned AGA and another copy shall be furnished to the Principal Secretary, DPAR,Government of Karnataka for giving necessary instructions to controlling authorities."

ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ನೀಡಿರುವ ಮೇಲ್ಕಂಡ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಈ ಮೂಲಕ ಸೂಚಿಸಲಾಗಿದೆ.

(ಡಾ: ಮಂಗಳ ಜಿ.ಎಸ್.) 16/3/1?
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರದ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 500 ಪ್ರತಿಗಳನ್ನು ಒದಗಿಸುವಂತೆ ಕೋರಲಾಗಿದೆ.

ಪ್ರತಿ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
3) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
4) ರಾಜ್ಯಪಾಲರ ಕಾರ್ಯದರ್ಶಿಯವರು
5) ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು
6) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
7) ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ - 110 011.
8) *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ವಿಧಾನ ಪರಿಷತ್ತು
9) ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
10) *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
11) *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬಿಡಿಎ ಸಂಕೀರ್ಣ, ಇಂದಿರಾನಗರ, ಬೆಂಗಳೂರು.
12) *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
13) *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು
14) ಎಲ್ಲಾ ಇಲಾಖಾ ಮುಖ್ಯಸ್ಥರು
15) ಎಲ್ಲಾ ಪ್ರಾದೇಶಿಕ ಆಯುಕ್ತರು
16) ಎಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
17) ಸರ್ಕಾರದ ಎಲ್ಲಾ ಅಪರ / ಸಹ / ಉಪ / ಅಧೀನ ಕಾರ್ಯದರ್ಶಿಗಳು
18) ಸಚಿವಾಲಯದ ಎಲ್ಲಾ ಶಾಖಾಧಿಕಾರಿಗಳು
19) ಶಾಖಾ ರಕ್ಷಾ ಕಡತ / ವಾರದ ಗೆಜೆಟ್ / ಬಿಡಿ ಪ್ರತಿಗಳು

( * ಮುಖಪತ್ರದೊಂದಿಗೆ)

## ಹಿಂಬರಹ

ಸಂಖ್ಯೆ: ಡಿಟಿಇ 2 ಇಎಸ್‌ಟಿ(9) 2013, /332 ದಿನಾಂಕ: 20-04-2013

ಮೇಲ್ಕಂಡ ಸರ್ಕಾರಿ ಸುತ್ತೋಲೆ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1) ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ
2) ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ ಮಾಹಿತಿಗಾಗಿ
3) ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (7) ಮತ್ತು (10) ವಿಭಾಗಕ್ಕೆ ಮಾಹಿತಿಗಾಗಿ.
4) ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ಆಡಳಿತಾಧಿಕಾರಿ.

20/4